ಸ್ವರ್ಗಂಗಾಜನಕ ನಮ್ಮ ವಿಜಯ ವಿಠ್ಠಲನಂಘ್ರಿ
ದುರ್ಗಾಶ್ರಯಮಾಡಿ ಬದುಕುವಂತೆ ಮಾಡು
ಮಟ್ಟ ತಾಳ
ಅರಿದರಾಂಕುಶ ಶಕ್ತಿ ಪರಶು ನೆಗಲಿಖಡ್ಗ
ಸರಸಿಜ ಗದೆ ಮುದ್ಗರ ಚಾಪ ಮಾರ್ಗಣ
ವರ ಅಭಯ ಮುಸಲ ಪರಿ ಪರಿ ಆಯುಧವ
ಧರಿಸಿ ಮೆರೆವ ಲಕುಮಿ ಸರಸಿಜ ಭವ ರುದ್ರ
ಸರುವ ದೇವತೆಗಳ ಕರುಣಾಪಾಂಗದಲ್ಲಿ
ನಿರೀಕ್ಷಿಸಿ ಅವರವರ ಸ್ವರೂಪಸುಖ ಕೊಡುವ
ಸಿರಿಭೂಮಿ ದುರ್ಗಾ ಸರ್ವೋತ್ತಮ
ನಮ್ಮ ವಿಜಯ ವಿಠ್ಠಲನಂಘ್ರಿ
ಪರಮ ಭಕುತಿಯಿಂದ ಸ್ಮರಿಸುವ ಜಗಜ್ಜನನಿ || ೨ ||
ತ್ರಿವಿಡಿ ತಾಳ
ಸ್ತುತಿಮಾಡುವೆ ನಿನ್ನ ಕಾಳಿ ಮಹಾಕಾಳಿ ಉ
ನ್ನತಬಾಹು ಕರಾಳವದನೆ ಚಂದಿರಮುಖೆ
ಧೃತಿ ಶಾಂತಿ ಬಹುರೂಪೆ ರಾತ್ರಿ ರಾತ್ರಿ ಚರಣೆ
ಸ್ಥಿತಿಯೆ ನಿದ್ರಾಭದ್ರೆ ಭಕ್ತವತ್ಸಲೆ ಭವ್ಯೆ
ಚತುರಷ್ಟ ದ್ವಿಹಸ್ತೆ ಹಸ್ತಿ ಹಸ್ತಿಗಮನೆ ಅ
ದ್ಭುತ ಪ್ರಬಲೆ ಪ್ರವಾಸೆ ದುರ್ಗಾರಣ್ಯವಾಸೆ
ಕ್ಷಿತಿಭಾರಹರಣೆ ಕ್ಷೀರಾಬ್ಧಿತನಯೆ ಸ
ದ್ಗತಿ ಪ್ರದಾತೆ ಮಾಯಾ ಶ್ರೀಯೆ ಇಂದಿರೆ ರಮೆ
ದಿತಿಜಾತ ನಿಗ್ರಹೆ ನಿರ್ಧೂತ ಕಲ್ಮಷೆ
ಪ್ರತಿಕೂಲ ಭೇದೆ ಪೂರ್ಣ ಭೊಧೆ ರೌದ್ರೆ
ಅತಿಶಯರಕ್ತ ಜಿಹ್ವಾಲೋಲೆ ಮಾಣಿಕ್ಯಮಾಲೆ
ಜಿತಕಾಮೆ ಜನನ ಮರಣ ರಹಿತೆ ಖ್ಯಾತೆ
ಘೃತ ಪಾತ್ರ ಪರಮಾನ್ನ ತಾಂಬೂಲ ಹಸ್ತೆ ಸು